# ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ 3/ಸಿಆರ್-52 /2022-23

ಸಮಾಜ ಕಲ್ಯಾಣ ಆಯುಕ್ತರ ಕಛೇರಿ.
5ನೇ ಮಹಡಿ. ಬಹುಮಹಡಿಗಳ ಕಟ್ಟಡ.
ಬೆಂಗಳೂರು. ದಿನಾಂಕ: 20/1/2023

## ಅಧಿಕೃತ ಜ್ಞಾಪನ

**ವಿಷಯ** : ಸಮಾಜ ಕಲ್ಯಾಣ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರು ವೃಂದದ ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ದಿನಾಂಕ:31-12-2022 ಕ್ಕೆ ಅಂತ್ಯಗೊಂಡಂತೆ ದಿನಾಂಕ:01-01-2023 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ: 1 ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತಾ) ನಿಯಮಗಳು. 1957

2 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 48 ಎಸ್ಎಸ್ಆರ್ 75 ದಿ:05-07-1976

3 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 43 ಸೇನೆನಿ 87 ದಿ:14-12-1987

4 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 07 ಸೇನೆನಿ 96 ದಿ:16-07-1996

5 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 32 ಸೇನೆನಿ 2003 ದಿ:10-06-2003

6 ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 3 ಎಸ್ಆರ್ಎಸ್ 2019 ದಿ:04-06-2019

7 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿ:10-12-2021

*******

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತಾ) ನಿಯಮಗಳು. 1957 ರ ನಿಯಮ 10 ರಡಿ ಜೇಷ್ಠತಾ ನಿಯಮಗಳನ್ನು ಅನುಸರಿಸಿ ಪ್ರತಿಯೊಂದು ವೃಂದದ ಜೇಷ್ಟತಾ ಪಟ್ಟಿಯನ್ನು ಪ್ರತಿ ವರ್ಷ ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸಬೇಕಾಗಿರುತ್ತದೆ.

ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಸಂಬಂಧಿಸಿದಂತೆ. ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಎರಡು ಮೂಲಗಳಿಂದ ಭರ್ತಿ ಮಾಡಲು ಅನುಪಾತ(Quota) ನಿಗದಿಪಡಿಸಿರುವಲ್ಲಿ. ನಿಗದಿತ ಅನುಪಾತದ ಪ್ರಕಾರ ನೇರ ನೇಮಕಾತಿ ಮತ್ತು ಮುಂಬಡ್ತಿ ಪಾಲಿನ ಹುದ್ದೆಗಳನ್ನು ಭರ್ತಿ ಮಾಡಲು ರಿಕ್ತ ಸ್ಥಾನ ಆಧಾರಿತವಾಗಿ ವರ್ಗೀಕರಣ ಮಾಡುವ ಕುರಿತು ಉಲ್ಲೇಖ (2) ಮತ್ತು (3) ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

ಸದರಿ ಮಾರ್ಗಸೂಚಿಗಳಿಗೆ ಅನುಗುಣವಾಗಿ ಉಲ್ಲೇಖ (1) ರ ಸರ್ಕಾರಿ ನೌಕರರ ಜೇಷ್ಟತೆ ನಿಯಮಗಳನ್ವಯ ಜೇಷ್ಟತಾ ಪಟ್ಟಿಯನ್ನು ಸಿಧ್ಧಪಡಿಸಲು ಉಲ್ಲೇಖ (4) ರಿಂದ (6) ವರೆಗಿನ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ನಮೂನೆಯನ್ನು ನಿಗದಿಪಡಿಸಲಾಗಿದೆ.

ಉಲ್ಲೇಖ (7) ರ ಅಧಿಕೃತ ಜ್ಞಾಪನದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಅನುಪಾತದನ್ವಯ (Quota) ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ರಿಕ್ತ ಸ್ಥಾನ ಆಧಾರಿತ ವರ್ಗೀಕರಣ ಮಾಡುವ ಪದ್ಧತಿಯನ್ನು ರದ್ದುಪಡಿಸಿ, ಹುದ್ದೆ ಆಧಾರಿತ ವರ್ಗೀಕರಣ ಅನುಸರಿಸಿ ಭವಿಷ್ಯವರ್ತಿಯಾಗಿ ಭರ್ತಿ ಮಾಡಲು ಹಿಂದಿನ ಮಾರ್ಗಸೂಚನೆಯನ್ನು ಮಾರ್ಪಡಿಸಿ, ಪರಿಷ್ಕೃತ ಮಾರ್ಗಸೂಚನೆಗಳನ್ನು ನೀಡಲಾಗಿರುತ್ತದೆ ಹಾಗೂ ಜೇಷ್ಟತಾ ಪಟ್ಟಿ ಸಿದ್ಧಪಡಿಸಲು ಈ ಹಿಂದಿನ ಉಲ್ಲೇಖ (4) ರಿಂದ (6) ರವರೆಗಿನ ಅಧಿಕೃತ ಜ್ಞಾಪನದಲ್ಲಿ ನಿಗದಿಪಡಿಸಲಾದ ನಮೂನೆಗಳನ್ನು ಮಾರ್ಪಡಿಸಿದೆ.

ಉಲ್ಲೇಖ (7) ರ ಸರ್ಕಾರದ ಅಧಿಕೃತ ಜ್ಞಾಪನ ಅನುಬಂಧ-1 ರಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಎರಡು ವಿಧಾನಗಳಿಂದಲೂ ನೇಮಕಾತಿ ಮಾಡುವುದಕ್ಕೆ ಸಂಬಂಧಿಸಿದಂತೆ ನಮೂನೆಯನ್ನು ಮತ್ತು ಅನುಬಂಧ-2 ರಲ್ಲಿ ನೇರ ನೇಮಕಾತಿ ಅಥವಾ ಮುಂಬಡ್ತಿ ಒಂದೇ ವಿಧಾನದ ಮೂಲಕ ಭರ್ತಿ ಮಾಡುವ ಹುದ್ದೆಗಳಿಗೆ ಸಂಬಂಧಿಸಿದಂತೆ ಜೇಷ್ಟತಾ ಪಟ್ಟಿಯನ್ನು ಸಿದ್ಧಪಡಿಸಲು ನಮೂನೆಯನ್ನು ನಿಗದಿಪಡಿಸಲಾಗಿದೆ.

ಅದರಂತೆ ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರು ವೃಂದಕ್ಕೆ ಸಂಬಂಧಿಸಿದಂತೆ ಹುದ್ದೆಗಳ ವಾಸ್ತವಿಕ ಮಾಹಿತಿಯನ್ನು ಅನುಬಂಧ-1 ರ ಭಾಗ-(i) ರಲ್ಲಿ ಮತ್ತು ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಹಾಗೂ ಉಳಿಕೆ ಮೂಲ ವೃಂದದ ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ಅನುಬಂಧ-1 ರ ಭಾಗ-(ii) ರಲ್ಲಿ ದಿನಾಂಕ:31-12-2022 ಕ್ಕೆ ಅಂತ್ಯಗೊಂಡಂತೆ ದಿ:01-01-2023 ರಲ್ಲಿದ್ದಂತೆ ಸಮಾಜ ಕಲ್ಯಾಣ ಇಲಾಖೆ ವೆಬ್ ಸೈಟ್ sw.kar.nic.in ನಲ್ಲಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಸಲ್ಲಿಸಲು ದಿ: 07/02/2023 ರವರೆಗೆ ಕಾಲಾವಕಾಶ ನೀಡಲಾಗಿದೆ.

ಸದರಿ ಜೇಷ್ಟತಾ ಪಟ್ಟಿಯಿಂದ ಬಾಧಿತರಾಗುವ ಎಲ್ಲಾ ನೌಕರರು ಸದರಿ ತಾತ್ಕಾಲಿಕ ಜೇಷ್ಟತಾ ಪಟ್ಟಿಯಲ್ಲಿನ ನೌಕರರ ಹೆಸರು, ನೇಮಕಾತಿ ವಿಧಾನ, ಮೀಸಲಾತಿ ವರ್ಗ, ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ಜೇಷ್ಟತೆಗೆ ಪರಿಗಣಿಸಲಾದ ಅರ್ಹತೆ ದಿನಾಂಕ, ಜೇಷ್ಟತೆ ನಿಗದಿಪಡಿಸಿರುವಲ್ಲಿ ವ್ಯತ್ಯಾಸ/ಹೆಸರು ಕೈಬಿಟ್ಟುಹೋಗಿರುವ, ಲೋಪದೋಷಗಳಿದ್ದಲ್ಲಿ ಸಂಬಂಧಪಟ್ಟ ನೌಕರರು ಆಕ್ಷೇಪಣೆಯನ್ನು ಲಿಖಿತವಾಗಿ ತಮ್ಮ ಕಛೇರಿ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು. ಸದರಿ ಆಕ್ಷೇಪಣೆಗಳನ್ನು ದೃಢೀಕೃತ ದಾಖಲೆಗಳೊಂದಿಗೆ ಈ ಕಛೇರಿಗೆ ನೊಂದಣಿ ಅಂಚೆ ಮೂಲಕ ಸಂಬಂಧಪಟ್ಟ ಕಛೇರಿ ಮುಖ್ಯಸ್ಥರು ಸಲ್ಲಿಸತಕ್ಕದ್ದು. ನಿಗದಿತ ಅವಧಿ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.

20/01.23

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಎಲ್ಲಾ ಜಿಲ್ಲೆಗಳು.
4. ನಿರ್ದೇಶಕರು, ಡಾ:ಬಿ.ಆರ್ ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು.
5. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟುಗಳ ಆಯೋಗ, ಬೆಂಗಳೂರು.
6. ಮುಖ್ಯ ಆಡಳಿತಾಧಿಕಾರಿಗಳು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು.

7. ಕಾರ್ಯದರ್ಶಿಗಳು, ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
8. ಜಂಟಿ /ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಲ್ಲಾ ಜಿಲ್ಲೆಗಳು ರವರಿಗೆ ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಿರುವ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಡೌನ್‌ಲೋಡ್ ಮಾಡಿ ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಸಂಬಂಧಿಸಿದ ಜಿಲ್ಲೆ/ತಾಲ್ಲೂಕು ಕಛೇರಿಯಿಂದ ನೌಕರರಿಗೆ ಜಾರಿ ಮಾಡಲು ತಿಳಿಸಿದೆ.
9. ಯೋಜನಾ ಸಮನ್ವಯಾಧಿಕಾರಿಗಳು/ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಸಂಬಂಧಪಟ್ಟ ಜಿಲ್ಲೆಗಳು.
10. ಸಹಾಯಕ ನಿರ್ದೇಶಕರು (ಗ್ರೇಡ್-1)/ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ, ಎಲ್ಲಾ ತಾಲ್ಲೂಕುಗಳು ರವರಿಗೆ ನೌಕರರು ಸಲ್ಲಿಸುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅಂತಿಮ ದಿನಾಂಕದೊಳಗೆ ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.
11. ಕಛೇರಿ ಪ್ರತಿ/ಇತರೆ.

.1